# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೩<br>Part – III | ಬೆಂಗಳೂರು, ಬುಧವಾರ, ೧೦ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೯, ಶಕವರ್ಷ ೧೯೪೭)<br>BENGALURU, WEDNESDAY, 10 SEPTEMBER, 2025 (BHADRAPADA 19, SHAKAVARSHA 1947) | ನಂ. ೫೭೦<br>No. 570 |
|---|---|---|


## ಕರ್ನಾಟಕ ಸರ್ಕಾರ

ಸಂಖ್ಯೆ: ಹೆಚ್ ಡಿ 99 ಪಿಸಿಇ 2023(ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ, ಡಾ. ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:06.09.2025

## ಅಧಿಸೂಚನೆ

1. ಕೋವಿಡ್-19 ಸಾಂಕ್ರಾಮಿಕ ರೋಗದ ನಿವಾರಣೆ ಹಾಗೂ ತಡೆಗಟ್ಟುವಿಕೆ ಸಂಬಂಧವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಇತರೆ ಇಲಾಖೆಗಳು ಹಾಗೂ ಈ ಇಲಾಖೆಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಂಸ್ಥೆಗಳಲ್ಲಿ ಔಷಧಿ, ಉಪಕರಣಗಳು ಹಾಗೂ ಸಾಮಗ್ರಿಗಳ ಖರೀದಿ, ಆಮ್ಲಜನಕ ನಿರ್ವಹಣೆ, ಆಮ್ಲಜನಕ ಕೊರತೆಯಿಂದ ಉಂಟಾದ ಸಾವುಗಳು ಹಾಗೂ ಇತ್ಯಾದಿ ವಿಷಯಗಳ ಕುರಿತು 2021ರ ಜುಲೈ- ಆಗಸ್ಟ ನಲ್ಲಿ ನಡೆದ ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ನೀಡಿರುವ ವರದಿಯಲ್ಲಿನ ಗಂಭೀರವಾದ ಆರೋಪಗಳ ಬಗ್ಗೆ ತನಿಖೆಯನ್ನು ನಡೆಸಲು Commission of Inquiry Act 1952 ರ ನಿಯಮ 3 ಉಪನಿಯಮ 1 ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ನೇಮಿಸಿ 03 ತಿಂಗಳೊಳಗಾಗಿ ವರದಿ ಸಲ್ಲಿಸುವಂತೆ ದಿನಾಂಕ: 25.08.2023ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ ಹಾಗೂ ದಿನಾಂಕ:07.10.2023ರ ಅಧಿಸೂಚನೆಯಲ್ಲಿ ಸದರಿ ವಿಚಾರಣಾ ಆಯೋಗಕ್ಕೆ (Terms of References) ಅಂಶಗಳನ್ನು ನಿಗದಿಪಡಿಸಲಾಗಿರುತ್ತದೆ.

2. ದಿನಾಂಕ: 22.11.2023ರ ಅಧಿಸೂಚನೆಯಲ್ಲಿ ವಿಚಾರಣಾ ಆಯೋಗದ ಅವಧಿಯನ್ನು ದಿನಾಂಕ:24.05.2024ರವರೆಗೆ ವಿಸ್ತರಿಸಲಾಗಿತ್ತು. ತದನಂತರ ದಿನಾಂಕ:24.05.2024ರ ಅಧಿಸೂಚನೆಯಲ್ಲಿ ಆಯೋಗದ ಅವಧಿಯನ್ನು ದಿನಾಂಕ:31.08.2024 ರವರೆಗೆ, ದಿನಾಂಕ:07.10.2024ರ ಅಧಿಸೂಚನೆಯಲ್ಲಿ ಆಯೋಗದ ಅವಧಿಯನ್ನು ದಿನಾಂಕ:31.03.2025 ರವರೆಗೆ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್ ಡಿ 99 ಪಿಸಿಇ 2023(ಭಾಗ-1) ರಲ್ಲಿ ವಿಚಾರಣಾ ಆಯೋಗದ ಅವಧಿಯನ್ನು ದಿನಾಂಕ: 31.07.2025 ರವರೆಗೆ ಮತ್ತು ದಿನಾಂಕ:06.06.2025ರ ಅಧಿಸೂಚನೆಯಲ್ಲಿ ಆಯೋಗದ ಅವಧಿಯನ್ನು ದಿನಾಂಕ:01.08.2025 ರಿಂದ 31.08.2025 ರವರೆಗೆ ಒಂದು ತಿಂಗಳ ಅವಧಿಗೆ ವಿಸ್ತರಿಸಲಾಗಿತ್ತು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



3. ಸದರಿ ವಿಚಾರಣಾ ಆಯೋಗದ ಅವಧಿಯು ದಿನಾಂಕ:31.08.2025ಕ್ಕೆ ಕೊನೆಗೊಳ್ಳಲಿರುವುದರಿಂದ, ದಿನಾಂಕ:01.09.2025 ರಿಂದ 30.11.2025 ರವರೆಗೆ (ಮೂರು ತಿಂಗಳು) ವಿಚಾರಣಾ ಆಯೋಗವನ್ನು ವಿಸ್ತರಿಸಲು ಕೋರಿರುತ್ತಾರೆ. ಅದರಂತೆ, ಸರ್ಕಾರವು ಪರಿಶೀಲಿಸಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ನೇತೃತ್ವದ, **"ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದಾಗಿ ಮರಣ ಹೊಂದಿರುವ ಘಟನೆಗೆ" ಸಂಬಂಧಿಸಿದಂತೆ ವಿಚಾರಣಾ ಆಯೋಗದ ಅವಧಿಯನ್ನು ದಿನಾಂಕ:01.09.2025 ರಿಂದ 30.11.2025 ರವರೆಗೆ ವಿಸ್ತರಿಸಲಾಗಿದೆ**.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ನಾಗರಾಜು ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಕಾನೂನು & ಸುವ್ಯವಸ್ಥೆ)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH